# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/97/ಗ್ರಾಪಂಕಾ/2013, ದಿನಾಂಕ:27–06–2013.
2. ಅಪರ ನಿಬಂಧಕರು ವಿಚಾರಣೆಗಳು–7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:LOK/INQ/14-A/279/2013/ARE-7 ದಿನಾಂಕ: 10-01-2018.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/INQ/14-A/279/2013/ARE-7 ದಿನಾಂಕ: 11-01-2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/35/ಗ್ರಾಪಂಕಾ/2018, ದಿನಾಂಕ: 26–02–2018.
5. ಶ್ರೀ ಶಿವೇಗೌಡ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ:19–03–2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 9 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕು, ಕಬ್ಬಳ್ಳಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಶ್ರೀ ಹೊನ್ನೇಗೌಡ, ಬಿನ್ ಲೇಟ್ ಗಂಗೇಗೌಡ, ಮೂಕಿನಕೆರೆ ಗ್ರಾಮ, ಹಿರಿಸಾವೆ ಹೋಬಳಿ ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರ ಪತ್ನಿಯಾದ ಶ್ರೀಮತಿ ಕೆಂಪಮ್ಮನವರಿಗೆ ಕಬ್ಬಳಿ ಗ್ರಾಮ ಪಂಚಾಯಿತಿ ವತಿಯಿಂದ ಜನತಾ ಮನೆ (ಆಶ್ರಯ ಮನೆ) ಮಂಜೂರಾಗಿದ್ದು, ಸದರಿ ಮನೆ ಕಟ್ಟಲು ಹಂತ ಹಂತವಾಗಿ ಹಣ ಬಿಡುಗಡೆ ಮಾಡಬೇಕಾದಾಗ ಒಟ್ಟು, ರೂ.40,000/–ಗಳ ಪೈಕಿ ಮೊದಲನೇ ಕಂತಾಗಿ ರೂ.12,000/–ಗಳನ್ನು ಫಿರ್ಯಾದುದಾರರ ಹೆಂಡತಿಗೆ ಪಾವತಿಸಬೇಕಾದರೆ ಫಿರ್ಯಾದುದಾರರ ಹೆಂಡತಿಯ ಸಮಕ್ಷಮದಲ್ಲೆ ಕಾರ್ಯದರ್ಶಿ ಶ್ರೀ ಕೆ.ಜೆ.ಶಿವೇಗೌಡರವರು ರೂ.2000/–ಗಳನ್ನು ಕೊಡುವಂತೆ ಒತ್ತಾಯಿಸಿದ್ದು, ಅವರು ಮುಂದಿನ ಕಂತಿನ ಚೆಕ್ಕನ್ನು ಪಡೆಯುವಾಗ ಕೊಡುವುದಾಗಿ ಆಶ್ವಾಸನೆ ನೀಡಿ ಮೊದಲನೇ ಕಂತಿನ ಚೆಕ್ಕನ್ನು ಪಡೆದುಕೊಂಡಿರುತ್ತಾರೆಂದೂ, 2 ಮತ್ತು 3ನೇ ಕಂತಿನ ಹಣ ಕೊಡುವಂತೆ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಶ್ರೀ ಕೆ.ಜೆ.ಶಿವೇಗೌಡ ರವರನ್ನು ಕೇಳಲು ಸದರಿಯವರು ರೂ.2000/– ಹಣ ಕೊಡದ ಹೊರತು ಅವರ ಬಿಲ್ಲನ್ನು ಸಿದ್ಧಪಡಿಸಿ ಚೆಕ್ ನೀಡುವುದಿಲ್ಲವೆಂದು ಲಂಚದ ಹಣಕ್ಕೆ ಒತ್ತಾಯಿಸಿದ್ದು, ಫಿರ್ಯಾದಿದಾರರಿಂದ ದಿನಾಂಕ:22.07.2010 ರಂದು ರೂ.2000/– ಲಂಚದ ಹಣವನ್ನು ಸ್ವೀಕರಿಸುವಾಗ ಲೋಕಾಯುಕ್ತ ಪೋಲೀಸರ ಬಲೆಗೆ ಬಿದ್ದು ದುರ್ನಡತೆ ಎಸಗಿದ್ದು, ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಸದರಿಯವರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966 ರ ನಿಯಮ 3(1)(i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಕೆ.ಜಿ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತ ರವರು ಅಂಗೀಕರಿಸಿ ಶ್ರೀ ಕೆ.ಜಿ.ಶಿವೇಗೌಡ, ಕಾರ್ಯದರ್ಶಿ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (viii) ಅನ್ವಯ "ಸೇವೆಯಿಂದ ವಜಾಗಳಿಸುವ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಕೆ.ಜಿ.ಶಿವೇಗೌಡ, ಕಾರ್ಯದರ್ಶಿ, ಇವರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ವಿಚಾರಣಾ ವರದಿಯು ಏಕಪಕ್ಷೀಯವಾಗಿದ್ದು, ಸಾಕ್ಷ್ಯಾಧಾರಗಳ ಅನ್ವಯ ಸಿದ್ಧಪಡಿಸಿರುವುದಿಲ್ಲ. ದೂರುದಾರರಾದ ಶ್ರೀ ಹೆನ್ನೋಗೌಡ ಇವರು ಮನೆ ತೆರಿಗೆ ಕಟ್ಟಬೇಕಾಗಿದ್ದು, ದಿನಾಂಕ:25.06.2010 ರಂದು 2010-11ನೇ ಸಾಲು ಸೇರಿದಂತೆ ಒಟ್ಟು ರೂ.1,323/- ತೆರಿಗೆ ಪಾವತಿ ಮಾಡಲು ಅವರಿಗೆ ನೋಟೀಸು ಜಾರಿ ಮಾಡಲಾಗಿತ್ತು. ದಿನಾಂಕ:22.07.2010 ರಂದು ಕಬ್ಬಳ್ಳಿ ಗ್ರಾಮ ಪಂಚಾಯಿತಿಯ ಕಛೇರಿಗೆ ಹಾಜರಾಗಿ, ತೆರಿಗೆ ಬಾಬ್ತು ಹಣ ಪಾವತಿಸುವುದಾಗಿ ತಮ್ಮ ಕೈಯಿಂದ ನೋಟುಗಳನ್ನು ನನ್ನ ಕೈಗೆ ನೀಡಿದರು. ನಾನು ರಶೀದಿ ನೀಡುವುದಾಗಿ ಹೇಳುತ್ತಿದಂತೆಯೇ, ಕೆಲವೊಂದು ವ್ಯಕ್ತಿಗಳು ನನ್ನನ್ನು ಸುತ್ತುವರೆದು, ತಾವು ಲೋಕಾಯುಕ್ತ ಕಛೇರಿಯಿಂದ ಬಂದಿರುವುದಾಗಿ ತಿಳಿಸಿ, ಆ ಹಣವನ್ನು ತಮ್ಮ ವಶಕ್ಕೆ ಪಡೆದರು.

ಪ್ರಸ್ತುತ ವಿಚಾರಣೆಯಲ್ಲಿರುವ ಆರೋಪದ ಬಗ್ಗೆ ಪ್ರಧಾನ ಸೆಷನ್ಸ್ ನ್ಯಾಯಾಧೀಶರು ಮತ್ತು ವಿಶೇಷ ನ್ಯಾಯಾಧೀಶರು, ಹಾಸನ ಇವರ ನ್ಯಾಯಾಲಯದಲ್ಲಿ ವಿಶೇಷ ಮೊಕದ್ದಮೆ ಸಂಖ್ಯೆ:56/2012 ನಡೆದಿದ್ದು, ಅದರಲ್ಲಿ ಮಾನ್ಯ ನ್ಯಾಯಾಧೀಶರು ದಿನಾಂಕ:23.02.2016ರ ತೀರ್ಪಿನಲ್ಲಿ ನನ್ನ ವಿರುದ್ಧ ಆರೋಪ ಸಾಬೀತಾಗಿಲ್ಲವೆಂದು ನನ್ನನ್ನು ದೋಷಮುಕ್ತಗೊಳಿಸಿದ್ದಾರೆ. ದೂರುದಾರರೇ ತಮ್ಮ ಸಾಕ್ಷಿ ಹೇಳಿಕೆಯಲ್ಲಿ ನಾನು ಲಂಚ ಪಡೆದಿರುವುದಿಲ್ಲ ಎಂದು ಸಾಕ್ಷಿ ನುಡಿದರೂ ಸಹಾ ಆರೋಪ ಸಾಬೀತಾಗಿದೆ ಎಂದು ನಿರ್ಣಯ ದಾಖಲಿಸಿರುತ್ತಾರೆ. ನನ್ನ ವಿರುದ್ಧ ಇರುವ ಆರೋಪವು ಸತ್ಯಕ್ಕೆ ದೂರವಾದುದು. ಆದುದ್ದರಿಂದ ಈ ಪ್ರಕರಣದಿಂದ ನನ್ನನ್ನು ಕೈಬಿಟ್ಟು ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ತಮ್ಮ ವಿಚಾರಣಾ ವರದಿಯ ಪುಟ ಸಂಖ್ಯೆ 6 ರಿಂದ 20 ರ ವರೆಗೆ ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ.

The acquittal of the DGO., in Spl.C.No56/2012 on the file of the Hon'ble Principal Session Judge/Special Judge, Hassan as per Ex.D-2 itself is not a ground to exonerate the DGO., from the charges leveled against him. In the case on hand it is necessary to mention departmental enquiry is being conducted under the provisions of the KCS (CCA) Rules, 1957 for having committed misconduct as enumetated under the provision of KCS (Conduct) Rules, 1996 and there is no question of proof beyond all reasonable doubt. In the case on hand the probabilities itself is sufficient to accept the case of the Disciplinary Authority.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತ ರವರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ. ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (viii) ಅನ್ವಯ **"ಸೇವೆಯಿಂದ ವಜಾಗಳಿಸುವ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (viii) ಅನ್ವಯ **"ಸೇವೆಯಿಂದ ವಜಾಗಳಿಸುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/35/ಗ್ರಾಪಂಕಾ/2018, ಬೆಂಗಳೂರು, ದಿನಾಂಕ:20-10-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (viii) ಅನ್ವಯ **"ಸೇವೆಯಿಂದ ವಜಾಗಳಿಸುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1.ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2.ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3.ಅಪರ ನಿಬಂಧಕರು, ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4.ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.
6.ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚನ್ನರಾಯಪಟ್ಟಣ, ಹಾಸನ ಜಿಲ್ಲೆ.
7.ಶ್ರೀ ಕೆ.ಜೆ.ಶಿವೇಗೌಡ, ಕಾರ್ಯದರ್ಶಿ, ಕಬ್ಬಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ.
8.ಗಣಕ ಕೋಶ
9.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.